ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್‌ಗಳಲ್ಲಿ ನಗರ ಪ್ರದೇಶದ ಶಾಲೆಗಳಿಗೆ ಅನುದಾನ ಹಾಗೂ ಅಭಿವೃದ್ಧಿ

52 (121) - ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಗರ ವ್ಯಾಪ್ತಿಯಲ್ಲಿ ಶಾಲೆಗಳ ನಿರ್ವಹಣೆ ಹಾಗೂ ಅಭಿವೃದ್ಧಿ ಕಾಮಗಾರಿ, ಜಿಲ್ಲಾ ಪಂಚಾಯ್ತಿ ಹಾಗೂ ತಾಲ್ಲೂಕು ಪಂಚಾಯ್ತಿಗಳ ವ್ಯಾಪ್ತಿಗೆ ಒಳಪಡುತ್ತದೆಯೆ;

ಆ) ಹಾಗಿದ್ದಲ್ಲಿ ಪ್ರಸ್ತುತ ನಗರ ವ್ಯಾಪ್ತಿಯ ಶಾಲೆಗಳಿಗೆ, ಅನುದಾನ ನೀಡಿದೇ ಶಾಲೆಗಳ ದುರಸ್ತಿ ನಿರ್ವಹಣಾ ಹಾಗೂ ಅಭಿವೃದ್ಧಿ ಕಾರ್ಯ ಜಿಲ್ಲಾ ಪಂಚಾಯ್ತಿ ಹಾಗೂ ತಾಲ್ಲೂಕು ಪಂಚಾಯ್ತಿಗಳ ಉಪೇಕ್ಷೆಗೆ ಒಳಗಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

ಇ) ಗಮನಿಸಿದ್ದಲ್ಲಿ, ಈ ನ್ಯೂನತೆಯನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ;

ಈ) ತಾಲ್ಲೂಕಿನಲ್ಲಿ ನಗರ ಪ್ರದೇಶದ ಶಾಲೆಗಳಿಗೆ ಅನುದಾನದಲ್ಲಿ ನಿರ್ವಹಣೆ ಮತ್ತು ಅಭಿವೃದ್ಧಿಗೆ ಅನುದಾನದ ಪ್ರಮಾಣವನ್ನೇನಾದರೂ ನಿಗದಿಪಡಿಸುವುದೇ?

ಪೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಹೌದು

ಆ) ನಗರ ವ್ಯಾಪ್ತಿಯಲ್ಲಿ ತುಂಬಾ ಶಿಥಿಲಾವಸ್ಥೆಯಲ್ಲಿರುವ ಶಾಲೆಗಳ ಕಟ್ಟಡಗಳನ್ನು ಗುರುತಿಸಿ ಯಾವುದೇ ತಾರತಮ್ಯವಿಲ್ಲದೆ ಸದರಿ ಶಾಲಾ ಕಟ್ಟಡಗಳ ದುರಸ್ಥಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಅವಶ್ಯಕತೆಗನುಗುಣವಾಗಿ ದುರಸ್ತಿಯಾಗಬೇಕಾದ ಶಾಲೆಗಳನ್ನು ಗುರುತಿಸಿ ಬಿಡುಗಡೆಯಾಗುವ ಅನುದಾನದಲ್ಲಿ ಹಂತ ಹಂತವಾಗಿ ದುರಸ್ತಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

ಚಿಂತಾಮಣಿ ಸರ್ಕಾರಿ ಆಸ್ಪತ್ರೆಗೆ ಸಲಕರಣೆಗಳು ಮತ್ತು ಸಿಬ್ಬಂದಿಯನ್ನು ಒದಗಿಸುವುದು

55 (113) - ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ನಗರದಲ್ಲಿ ಹೊಸದಾಗಿ ನಿರ್ಮಿಸಿರುವ ಆಸ್ಪತ್ರೆಯನ್ನು ಎಷ್ಟು ಹಾಸಿಗೆಗಳ ಆಸ್ಪತ್ರೆಯಾಗಿ ನಿರ್ಮಿಸಲಾಗಿದೆ? ಹಾಗೂ ಯಾವ ರೀತಿ ಸಜ್ಜುಗೊಳಿಸಲಾಗುವುದು ಎಂಬುದನ್ನು ವಿವರವಾಗಿ ತಿಳಿಸುವುದು?